# Akashvani : Bangalore
# National Bulletin In Kannada
# 23.07.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**23.07.2024 / 19.35 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ೨೦೨೪-೨೫ ನೇ ಸಾಲಿನ ಮುಂಗಡಪತ್ರ ಮಂಡನೆ; ವಿಕಸಿತ ಭಾರತ ಯೋಜನೆಗಳ ಸಾಕಾರಗೊಳಿಸುವ ಪ್ರಾಮಾಣಿಕ ಪ್ರಯತ್ನ

೨. ನಗರಗಳ ಅಭಿವೃದ್ಧಿ, ಸುರಕ್ಷಿತ ಇಂಧನ, ಮೂಲಸೌಕರ್ಯ, ಅನ್ವೇಷಣೆ, ಸಂಶೋಧನೆಗೆ ಒತ್ತು

೩. ಆದಾಯ ತೆರಿಗೆ ಪಾವತಿಯಲ್ಲಿ ಸರಳೀಕೃತ ಕ್ರಮ; ೩ ಲಕ್ಷ ರೂಪಾಯಿವರೆಗೆ ತೆರಿಗೆ ವಿನಾಯಿತಿ

೪. ಕೇಂದ್ರ ಮುಂಗಡ ಪತ್ರಕ್ಕೆ ಕರ್ನಾಟಕದಲ್ಲಿ ಮಿಶ್ರ ಪ್ರತಿಕ್ರಿಯೆ; ಬಿಜೆಪಿ, ಜೆಡಿಎಸ್ ಸ್ವಾಗತಿಸಿದರೆ, ಕಾಂಗ್ರೆಸ್ ಟೀಕೆ

೫. ನೀಟ್ ಪದವೀಪೂರ್ವ ಮರು ಪರೀಕ್ಷೆ ಇಲ್ಲ; ಸುಪ್ರಿಂಕೋರ್ಟ್ ಸ್ಪಷ್ಟನೆ

**<><*<><>*><>**

’ವಿಕಸಿತ ಭಾರತ್’ ಸಂಕಲ್ಪದ ಅನ್ವಯ ೨೦೨೪-೨೫ನೇ ಸಾಲಿನ ಪೂರ್ಣಪ್ರಮಾಣದ ಮುಂಗಡಪತ್ರವನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿಂದು ಮಂಡನೆ ಮಾಡಿದರು. ಬೆಳಗ್ಗೆ ಕಲಾಪ ಸಮಾವೇಶವಾಗುತ್ತಿದ್ದಂತೆಯೇ ಹಣಕಾಸು ಸಚಿವರಿಗೆ ಆಯ-ವ್ಯಯ ಮಂಡನೆ ಮಾಡುವಂತೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಸೂಚಿಸಿದರು. ನಿರ್ಮಲಾ ಸೀತಾರಾಮನ್, ಕೇಂದ್ರ ಸರ್ಕಾರದ ಧ್ಯೇಯೋಧ್ಯೇಶ ಹಾಗೂ ನಾಲ್ಕು ವಲಯದ ಅಭಿವೃದ್ಧಿಪಥ ಹೊಂದುವ ೯ ಅಂಶಗಳ ಯೋಜನೆಯನ್ನು ಸುಮಾರು ೩ ಗಂಟೆ ೫೦ ನಿಮಿಷಗಳ ಕಾಲ ಸತತವಾಗಿ ಭಾಷಣ ಓದಿ, ಉದ್ದೇಶವನ್ನು ಸದನದ ಮುಂದಿಟ್ಟರು. ಉದ್ಯೋಗ, ಕೌಶಲ್ಯಾಭಿವೃದ್ಧಿ, ಸಣ್ಣ ಅತೀ ಸಣ್ಣ ಉದ್ಯಮೆದಾರರಿಗೆ ಮತ್ತು ಮಧ್ಯಮ ವರ್ಗದವರ ಅನುಕೂಲಕ್ಕೆ ಯೋಜನೆಗಳ ಪ್ರಸ್ತಾವನೆಯನ್ನು ಸದನದ ಮುಂದೆ ಪ್ರಸ್ತಾಪಿಸಿದರು. ರೈತ ಸಮುದಾಯದ ಆದಾಯ ಹೆಚ್ಚಿಸುವ ಹಾಗೂ ಆರ್ಥಿಕ

ಸಂಪನ್ಮೂಲ ದ್ವಿಗುಣ ಮಾಡುವ ಕಾರ್ಯಕ್ರಮಗಳನ್ನು ಪ್ರಕಟಿಸಿದರು. mರಾಷ್ಟ್ರೀಯ ಸಹಕಾರ ನೀತಿ ಎಲ್ಲ ವಲಯದಲ್ಲಿಯೂ ಸಹಕಾರ ಬಲವರ್ಧನೆ ಮೂಲಕ ದೇಶದ ಆರ್ಥಿಕ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ಸದನದ ಮುಂದೆ ಪ್ರಸ್ತಾಪಿಸಿದರು. ತೈಲ ಬೀಜ ಉತ್ಪಾದನೆ, ಸಾಸಿವೆ, ಕಡಲೆಕಾಯಿ, ಸೋಯಾ, ಸೂರ್ಯಕಾಂತಿ ಬೆಳೆ ಬೆಳೆಯಲು ರೈತ ಸಮುದಾಯಕ್ಕೆ ಪ್ರೋತ್ಸಾಹ ನೀಡುವ ಕಾರ್ಯಕ್ರಮ ಘೋಷಿಸಿದರು. ತರಕಾರಿ, ಉತ್ಪಾದನೆ, ಸರಬರಾಜು ಮಾಡಲು ಕಾರ್ಯಕ್ರಮ ಪ್ರಕಟಿಸಿದ ಅವರು, ೧೦೯ ಹೊಸ ಹೆಚ್ಚು ಉತ್ಪಾದನೆ ಮಾಡುವ ತಳಿಗಳನ್ನು ತೋಟಗಾರಿಕೆಯಲ್ಲಿ ಅಳವಡಿಸಿ, ಪ್ರೋತ್ಸಹಿಸಲು ಹಾಗೂ ೩೨ ವಿಧದ ತೋಟಗಾರಿಕಾ ಬೆಳೆಗಳ ಆಧುನಿಕ ಬೆಳೆ ಬೆಳೆಯಲು ರೈತ ಸಮುದಾಯಕ್ಕೆ ಸಲಹೆ ಮಾರ್ಗದರ್ಶನ ನೀಡಲು, ಸಂಶೋಧನೆಗೆ ಹಾಗೂ ಅಭಿವೃದ್ಧಿಗೆ ಒತ್ತು ನೀಡುವುದಾಗಿ ಕೇಂದ್ರ ಹಣಕಾಸು ಸಚಿವರು ತಮ್ಮ ಆಯ-ವ್ಯಯ ಭಾಷಣದಲ್ಲಿ ಉಲ್ಲೇಖಿಸಿದರು. ಮಾನವ ಸಂಪನ್ಮೂಲ ಮತ್ತು ಸಾಮಾಜಿಕ ನ್ಯಾಯ ಜೊತೆಗೆ ಇಂಧನ ಭದ್ರತೆ, ನಗರಗಳ ಅಭಿವೃದ್ಧಿ, ಮೂಲಸೌಕರ್ಯ, ಅನ್ವೇಷಣೆ, ಸಂಶೋಧನೆಗೆ ಕೇಂದ್ರ ಸರ್ಕಾರ ಮತ್ತಷ್ಟು ಒತ್ತು ನೀಡಲಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು. ಮೂರು ಹೊಸ ಕಾರ್ಯಕ್ರಮಗಳನ್ನು ಪ್ರಕಟಿಸಿದ ಹಣಕಾಸು ಸಚಿವರು, ಮೂಲಸೌಕರ್ಯ ಅಭಿವೃದ್ಧಿಗೆ ೧೧ ಲಕ್ಷ ಕೋಟಿ ರೂಪಾಯಿ ಮೀಸಲು. ಮಹಿಳೆ ಮತ್ತು ಮಕ್ಕಳ ಸಂರಕ್ಷಣೆಗೆ ೩ ಲಕ್ಷ ಕೋಟಿ ರೂಪಾಯಿ ಹಣವನ್ನು ಮೀಸಲಿಡುವುದರ ಜೊತೆಗೆ, ದುಡಿಯುವ ಯುವ ಕೈಗಳಿಗೆ ಪ್ರೋತ್ಸಾಹ ನೀಡುವ ಯೋಜನೆಯನ್ನು ಸಚಿವೆ ನಿರ್ಮಲಾ ಸೀತಾರಾಮನ್ ಪ್ರಕಟಿಸಿದರು. ಮುದ್ರಾ ಸಾಲ ಮಿತಿಯನ್ನು ೧೦ ಲಕ್ಷದಿಂದ ೨೦ ಲಕ್ಷದವರಿಗೆ ಹೆಚ್ಚಿಸಲು ಉದ್ದೇಶಿಸಲಾಗಿದೆ. ಸ್ವ-ಉದ್ಯೋಗ ಕಾರ್ಯಕ್ರಮಕ್ಕೆ ನೆರವಿನ ಪ್ರಮಾಣ ಏರಿಕೆ ಮಾಡಲಾಗಿದೆ ಎಂದು ಅವರು ತಿಳಿಸಿದರು. ಮುಂದಿನ ಐದು ವರ್ಷಗಳಲ್ಲಿ ಇ-ವಾಣಿಜ್ಯ ವಹಿವಾಟು, ಖಾಸಗಿ, ಸಾರ್ವಜನಿಕವಾಗಿ ಪಿಪಿಪಿ ಯೋಜನೆಯಡಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಇದರಿಂದ ೧ ಕೋಟಿಗೂ ಹೆಚ್ಚು ಉದ್ಯೋಗ ಸೃಷ್ಟಿಯಾಗಲಿವೆ ಎಂದು ಅವರು ತಿಳಿಸಿದರು. ದೇಶೀಯವಾಗಿ ಖನಿಜ ಉತ್ಪಾದನಾ ವಲಯದಲ್ಲಿ ಹಾಗೂ ಪುನರ್‌ಬಳಕೆ ಖನಿಜ ವಲಯದಲ್ಲಿ ಹಲವು ಕಾರ್ಯಕ್ರಮಗಳನ್ನು ಪ್ರಕಟಿಸಿದ ಅವರು, ೧೪ ಪ್ರಮುಖ ನಗರಗಳಲ್ಲಿ ಸುಸ್ಥಿರ ಅಭಿವೃದ್ಧಿ ಕಾರ್ಯಕ್ರಮ ಕೈಗೆತ್ತಿಕೊಳ್ಳಲಾಗುವುದು ಎಂದರು. ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ೧ ಕೋಟಿ ಕಡು ಬಡವರು ಹಾಗೂ ಮಧ್ಯಮ ವರ್ಗದವರಿಗೆ ಮನೆ ನಿರ್ಮಾಣ ಮಾಡಿಕೊಳ್ಳಲು ೧೦ ಲಕ್ಷ ಕೋಟಿ ರೂಪಾಯಿ ಹಣವನ್ನು ನಾಲ್ಕು ಹಂತದಲ್ಲಿ ಜಾರಿಗೆ ತರಲಾಗುವುದು ಎಂದರು. ದೇಶದ ಆರ್ಥಿಕ ಬೆಳವಣಿಗೆ ೬.೪ ರಷ್ಟು ಇರಲಿದ್ದು, ಸುಸ್ಥಿರ ಬೆಳವಣಿಗೆಗೆ ಹಾಗೂ ಹೂಡಿಕೆಗೆ ೧. ೨೫ ಲಕ್ಷ ಕೋಟಿ ರೂಪಾಯಿ ತೆಗೆದಿರಿಸಲಾಗಿದೆ ಎಂದರು. ಆದಾಯ ತೆರಿಗೆ ಪಾವತಿಸುವವರಿಗೆ ೭೫ ಸಾವಿರ ರೂಪಾಯಿವರೆಗೆ ಯಾವುದೇ ತೆರಿಗೆ ಇರುವುದಿಲ್ಲ. ೩ ಲಕ್ಷ ರೂಪಾಯಿ ವರೆಗೆ ವಾರ್ಷಿಕ ಆದಾಯ ತೆರಿಗೆ ವಿನಾಯಿತಿ. ಮೂರರಿಂದ ಏಳು ಲಕ್ಷ ರೂಪಾಯಿವರೆಗೆ ಶೇಕಡ ೫ ರಷ್ಟು ಹಾಗೂ ೭ ರಿಂದ ೧೦ ಲಕ್ಷದವರಿಗೆ ಶೇಕಡ ೧೦ ರಷ್ಟು, ೧೦ ರಿಂದ ೧೨ ಲಕ್ಷದವರಿಗೆ ಶೇಕಡ ೧೫ ಹಾಗೂ ೧೨ ರಿಂದ ೧೫ ಲಕ್ಷದ ವರೆಗೆ ಶೇಕಡ ೨೦

ರಷ್ಟು ಮತ್ತು ೧೫ ಲಕ್ಷ ಮೇಲ್ಪಟವರಿಗೆ ಶೇಕಡ ೩೦ ರಷ್ಟು ತೆರಿಗೆ ಪಾವತಿಸಬೇಕು ಎಂದು ಸದನದಲ್ಲಿ ಪ್ರಸ್ತಾವ ಮಂಡಿಸಿದರು. ಇದಕ್ಕೂ ಮುನ್ನ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಬಜೆಟ್ ಪ್ರತಿಯನ್ನು ರಾಷ್ಟ್ರಪತಿಯವರಿಗೆ ಮುಂದೆ ಪ್ರಸ್ತಾಪಿಸಿದರು. ಇದಕ್ಕೂ ಮೊದಲು ಸಂಪುಟ ಸಭೆಯಲ್ಲಿ ಇದಕ್ಕೆ ಅನುಮೋದನೆ ದೊರೆಯಿತು. ಕಾರ್ಮಿಕರ ಭವಿಷ್ಯ ನಿಧಿ ಮೇಲಿನ ಬಡ್ಡಿದರ ಮುಂದುವರಿದಿದ್ದು, ಸುಮಾರು ೩೦ ಲಕ್ಷ ಯುವಕರಿಗೆ ಅನುಕೂಲವಾಗಿದೆ. ೧ ಸಾವಿರಕ್ಕೂ ಹೆಚ್ಚು ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲಾಗುವುದು. ೨೦ ಲಕ್ಷಕ್ಕೂ ಹೆಚ್ಚು ಯುವಕರಿಗೆ ಮುಂದಿನ ಐದು ವರ್ಷಗಳಲ್ಲಿ ಕೌಶಲ್ಯ ತರಬೇತಿ ನೀಡಲು ಉದ್ದೇಶಿಸಲಾಗಿದೆ. ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ನೀಡುತ್ತಿರುವ ನೆರವಿನ ಮೊತ್ತವನ್ನು ಹೆಚ್ಚಿಸಲಾಗಿದ್ದು, ಸುಮಾರು ೨೫ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳ ಇದರ ಪ್ರಯೋಜನ ಪಡೆಯಲಿದ್ದಾರೆ ಎಂದು ಅಂದಾಜು ಮಾಡಲಾಗಿದೆ.

<><*<><>*><>

ಆದಾಯ ತೆರಿಗೆ ಕಾಯ್ದೆ-೧೯೬೧ ಕ್ಕೆ ತಿದ್ದುಪಡಿ ಮಾಡಿ, ಸರಳೀಕೃತ ತೆರಿಗೆ ಪಾವತಿಗೆ ಆದ್ಯತೆ ನೀಡಲಾಗುವುದು. ಮಾರಣಾಂತಿಕ ಕಾಯಿಲೆಗಳಾದ ಕ್ಯಾನ್ಸರ್ ಇತರ ಔಷಧಿಗಳ ಮೇಲಿನ ಸೀಮಾ ಸುಂಕ ಇಳಿಕೆ. ಮೊಬೈಲ್ ಹಾಗೂ ಅದರ ಉಪಕರಣಗಳ ಮೇಲೆ ತೆರಿಗೆಯನ್ನು ಶೇಕಡ ೧೫ ಕ್ಕೆ ಇಳಿಸಲಾಗುವುದು. ಚಿನ್ನ, ಬೆಳ್ಳಿ, ಪ್ಲಾಟಿನಮ್ ಮೇಲಿನ ಸೀಮಾ ಸುಂಕವನ್ನು ಶೇಕಡ ೬.೪ ರಿಂದ ಶೇಕಡ ೬ ಕ್ಕೆ ಇಳಿಸಲಾಗುವುದು.

<><*<><>*><>

ಎಲ್ಲ ವರ್ಗದವರ, ಎಲ್ಲ ಸಮುದಾಯದ ಆಯ-ವ್ಯಯವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿಕ್ರಿಯಿಸಿದ್ದಾರೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಲೋಕಸಭೆಯಲ್ಲಿಂದು ಮಂಡಿಸಿದ ೨೦೨೪-೨೫ನೇ ಸಾಲಿನ ಬಜೆಟ್‌ಗೆ ಪ್ರತಿಕ್ರಿಯಿಸಿ ರೈತ ಸಮುದಾಯದ ಆದಾಯ ದ್ವಿಗುಣ, ನಿರುದ್ಯೋಗಿಗಳಿಗೆ ಉದ್ಯೋಗ, ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ಹೆಚ್ಚಿಸುವ ಯೋಜನೆಗಳು ಆಯ-ವ್ಯಯದಲ್ಲಿವೆ ಎಂದು ಅವರು ಹೇಳಿದರು. ಕಳೆದ ಹತ್ತು ವರ್ಷಗಳಲ್ಲಿ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡುವ ಮೂಲಕ ೨೫ ಕೋಟಿ ಜನರಿಗೆ ಉದ್ಯೋಗ ಕಲ್ಪಿಸಿದ್ದೇವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><*<><>*><>

ಕೇಂದ್ರದ ಮುಂಗಡ ಪತ್ರ ದೇಶದ ಅಭಿವೃದ್ಧಿಗೆ ಪೂರಕವಾಗಿದೆ ಎಂದು ತೆಲುಗು ದೇಶಂ ನಾಯಕ ಕೇಂದ್ರ ಸಚಿವ ಕಿಂಜರಪು ರಾಮಮೋಹನ ನಾಯ್ಡು ಹೇಳಿದ್ದಾರೆ. ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಬಜೆಟ್ ಎಲ್ಲರ ಕನಸಾಗಿದೆ ಎಂದು

ಹೇಳಿದ್ದಾರೆ. ಈಶಾನ್ಯ ರಾಜ್ಯಗಳ ಬೆಳವಣಿಗೆಗೆ ಆಯ-ವ್ಯಯ ಪೂರಕವಾಗಿದೆ ಎಂದು ಹೇಳಿದರು.

ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್, ಉದ್ಯೋಗ ಹೆಚ್ಚಿಸುವ ಕಾರ್ಯಕ್ರಮವನ್ನು ಹಣಕಾಸು ಸಚಿವರು ಪ್ರಕಟಿಸಿರುವುದಾಗಿ ಹೇಳಿದ್ದಾರೆ. ಜೆಡಿಯು ಮುಖಂಡ ರಾಜೀವ್ ರಂಜನ್ ಸಿಂಗ್, ಆಯ-ವ್ಯಯ ಬಿಹಾರ ಜನತೆಗೆ ಹಾಗೂ ಪ್ರವಾಸೋದ್ಯಮಕ್ಕೆ ಒತ್ತು ನೀಡಿದೆ ಎಂದರು. ಕಾಂಗ್ರೆಸ್ ಮುಖಂಡ ಶಶಿತರೂರ್ ಪ್ರತಿಕ್ರಿಯೆಸಿ, ಉದ್ಯೋಗ ಖಾತರಿ ಯೋಜನೆಯ ರಾಜ್ಯಗಳ ತಾರತಮ್ಯವನ್ನು ನಿಭಾಯಿಸಿಲ್ಲ ಎಂದು ಪ್ರತಿಕ್ರಿಯಿಸಿದ್ದಾರೆ. ಶಿವಸೇನಾ ನಾಯಕ ಪ್ರಿಯಾಂಕ ಚತುರ್ವೇದಿ, ಮಹಾರಾಷ್ಟ್ರ ರಾಜ್ಯಕ್ಕೆ ನಿರ್ಧಿಷ್ಟವಾದ ಯೋಜನೆಗಳನ್ನು ಪ್ರಕಟಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಡಿಎಂಕೆ ನಾಯಕ ಟಿ.ಆರ್.ಬಾಲು, ಟಿಎಂಸಿ ನಾಯಕಿ ಕಲ್ಯಾಣ ಬ್ಯಾನರ್ಜಿ ಅವರು, ಆಯ-ವ್ಯಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ. ಕರ್ನಾಟಕದ ಸಂಸದರಾದ ಬಸವರಾಜ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಜಗದೀಶ್ ಶೆಟ್ಟರ್, ಜನಪರ ಸಾಮಾನ್ಯವರ್ಗದವರ ಆಯ-ವ್ಯಯವಾಗಿದೆ ಎಂದರು. ಕೇಂದ್ರ ಸಚಿವರಾದ ಎಚ್.ಡಿ.ಕುಮಾರ್‌ಸ್ವಾಮಿ, ವಿ.ಸೋಮಣ್ಣ ಹಾಗೂ ಶೋಭಾ ಕರಂದ್ಲಾಜೆ ಅವರುಗಳು ಆಯ-ವ್ಯಯವನ್ನು ಮುಕ್ತ ಕಂಠದಿಂದ ಪ್ರಶಂಸಿಸಿದ್ದಾರೆ. ಭಾರತೀಯ ಕೈಗಾರಿಕಾ ಒಕ್ಕೂಟದ ಅಧ್ಯಕ್ಷ ಅನಿಶ್ ಶಹಾ ಪ್ರತಿಕ್ರಿಯಿಸಿ, ದೇಶದ ಬೆಳವಣಿಗೆಗೆ ಪೂರಕ ಆಯ-ವ್ಯಯ ರೈತರು, ಯುವಕರು, ಮಹಿಳೆಯರಿಗೆ ಸಹಕಾರಿ ಎಂದು ಹೇಳಿದ್ದಾರೆ.

**<><*<><>*><>**

ಶಿಕ್ಷಣ, ಆರೋಗ್ಯ, ರಕ್ಷಣಾ ಕ್ಷೇತ್ರಗಳಿಗೆ ಅನುದಾನವನ್ನು ಗಣನೀಯವಾಗಿ ಖಡಿತ ಮಾಡಿದ್ದಾರೆ ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ್ದಾರೆ. ಕೇಂದ್ರ ಸರ್ಕಾರಕ್ಕೆ ಹಲವು ಯೋಜನೆಗಳ ಅನುಷ್ಠಾನಕ್ಕೆ ನೆರವು ಕೋರಿದ್ದೆವು. ಮಾಹಿತಿ ತಂತ್ರಜ್ಞಾನಕ್ಕೆ ನೀಡಿದ್ದ ಅನುದಾನವನ್ನು ಕಡಿಮೆ ಮಾಡಿರುವ ಕೇಂದ್ರ ಸರ್ಕಾರ, ಪರಿಶಿಷ್ಟ ಸಮುದಾಯ ಮತ್ತು ಅಲ್ಪ ಸಂಖ್ಯಾತರ ಅಭಿವೃದ್ಧಿಗೆ ಅನುದಾನವನ್ನು ಖಡಿತ ಮಾಡಿ, ರಾಜ್ಯಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಮೂಲ ಸೌಕರ್ಯ ಅನ್ವೇಷಣೆ ಹಾಗೂ ಅಭಿವೃದ್ಧಿಗೆ ಆಯ-ವ್ಯಯ ಪೂರಕವಾಗಿದೆ ಎಂದು ರಾಷ್ಟ್ರೀಯ ಹೆದ್ದಾರಿ ಹಾಗೂ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ಆಯ-ವ್ಯಯದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ್ದಾರೆ. ದೇಶದ ಉತ್ಪಾದನೆ ಹಾಗೂ ಬೆಳವಣಿಗೆಯ ಪ್ರಮಾಣದಲ್ಲಿ ಕೃಷಿ, ಉದ್ಯೋಗ, ಕೌಶಲ್ಯಾಭಿವೃದ್ಧಿ ಜೊತೆಗೆ ಸಾಮಾಜಿಕ ನ್ಯಾಯಕ್ಕೆ ಒತ್ತು ನೀಡಲಾಗಿದೆ ಎಂದು ಅವರು ತಿಳಿಸಿದರು.

<><*<><>*><>

ಪ್ರಶ್ನೆಪತ್ರಿಕೆ ಸೋರಿಕೆ ಸಂಬಂಧಿಸಿದಂತೆ ದೇಶಾದ್ಯಂತ ಏಕಕಾಲಕ್ಕೆ ನಡೆದ ನೀಟ್ ಪದವೀಪೂರ್ವ ಪರೀಕ್ಷೆಯನ್ನು ಪುನಃ ನಡೆಸಬೇಕು ಎಂಬ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿಯನ್ನು ವಜಾಮಾಡಿದ ಸುಪ್ರಿಂಕೋರ್ಟ್ ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವ ಬಗ್ಗೆ ಯಾವುದೇ ದಾಖಲೆಗಳು ಇಲ್ಲ. ದೇಶಾದ್ಯಂತ ೨೩ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಪರೀಕ್ಷೆಯಿಂದ ದೊಡ್ಡ ಪ್ರಮಾಣದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಅಂಶ ಎಲ್ಲಿಯೂ ನಮೂದನೆಯಾಗಿಲ್ಲ. ಹಾಗಾಗಿ ಮರು ಪರೀಕ್ಷೆ ಮಾಡದಿರಲು ನ್ಯಾಯಪೀಠ ತೀರ್ಮಾನಿಸಿತು ಎಂದು ತ್ರಿಸದಸ್ಯ ಪೀಠ ತೀರ್ಪು ನೀಡಿದೆ. ಸುಪ್ರಿಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ತ್ರಿಸದಸ್ಯ ಪೀಠ ಈ ತೀರ್ಪು ಪ್ರಕಟಿಸಿತು.

<><*<><>*><>

ಏಷ್ಯಾ ಕಪ್ ಮಹಿಳಾ ಕ್ರಿಕೆಟ್ ಟೂರ್ನಿಯಲ್ಲಿ ಶ್ರೀಲಂಕಾದ ದಾಂಬೂಲದಲ್ಲಿ ಇಂದು ಭಾರತ-ನೇಪಾಳ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಈಗಾಗಲೇ ಎರಡು ಪಂದ್ಯಗಳನ್ನು ಗೆದ್ದಿರುವ ಭಾರತದ ವನಿತೆಯರ ತಂಡಕ್ಕೆ ಇದು ಕೊನೆಯ ಲೀಗ್ ಪಂದ್ಯವಾಗಿದ್ದು, ಗೆಲುವಿನ ಮೂಲಕ ಸೆಮಿ ಫೈನಲ್ ಗೆ ಪ್ರವೇಶಿಸುವ ತವಕದಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**